# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ಸರ್ಕಾರ ಸಚಿವಾಲಯದ ಉಪ ಕಾರ್ಯದರ್ಶಿ ಹಾಗೂ ಅದಕ್ಕಿಂತ ಮೇಲ್ಪಟ್ಟ ಅಧಿಕಾರಿಗಳ ಹಾಗೂ ಸಮಾನಾಂತರ ಅಧಿಕಾರಿಗಳ ನಿವಾಸದ ದೂರವಾಣಿ ವೆಚ್ಚ ಮತ್ತು ಬ್ರಾಡ್‌ಬ್ಯಾಂಡ್ ವೆಚ್ಚವನ್ನು ಮರುಪಾವತಿಸುವ ಬಗ್ಗೆ.

ಓದಲಾಗಿದೆ:

1) ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 02 ಬಿಇಎಂ 1998, ದಿನಾಂಕ: 05-11-1998 ಮತ್ತು ದಿನಾಂಕ: 23-07-1999
2) ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 143 ಡಿಟಿಎನ್ 2010, ದಿನಾಂಕ: 02-06-2010
3) ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 959 ವೆಚ್ಚ-12/2014, ದಿನಾಂಕ: 16.05.2016

************

ಪ್ರಸ್ತಾವನೆ:-

ಕರ್ನಾಟಕ ಸರ್ಕಾರ ಸಚಿವಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರದ ಅಪರ ಕಾರ್ಯದರ್ಶಿ/ಸಚಿವರ ಆಪ್ತ ಕಾರ್ಯದರ್ಶಿ ಶ್ರೇಣಿಯ ಅಧಿಕಾರಿಗಳ ನಿವಾಸಕ್ಕೆ 2 ತಿಂಗಳಿಗೆ 2000 ಕರೆಗಳ ಮಿತಿಯನ್ನು ಹಾಗೂ ಸರ್ಕಾರದ ಉಪ ಕಾರ್ಯದರ್ಶಿ/ಜಂಟಿ ಕಾರ್ಯದರ್ಶಿ/ಆಪ್ತ ಕಾರ್ಯದರ್ಶಿ ಗ್ರೇಡ್-1 ಹಾಗೂ ಸಮಾನಾಂತರ ಶ್ರೇಣಿಯ ಅಧಿಕಾರಿಗಳ ನಿವಾಸಕ್ಕೆ 2 ತಿಂಗಳಿಗೆ 1000 ಕರೆಗಳ ಮಿತಿಯನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರಿ ಆದೇಶದನ್ವಯ ನಿಗದಿಪಡಿಸಲಾಗಿದೆ. ಸಚಿವಾಲಯದ ಉಪ ಕಾರ್ಯದರ್ಶಿ ಹಾಗೂ ಅದಕ್ಕಿಂತ ಮೇಲ್ಪಟ್ಟ ಅಧಿಕಾರಿಗಳ ಹಾಗೂ ಸಮಾನಾಂತರ ಅಧಿಕಾರಿಗಳ ನಿವಾಸದ ದೂರವಾಣಿಯ ಬ್ರಾಡ್‌ಬ್ಯಾಂಡ್ ಸೌಲಭ್ಯಕ್ಕಾಗಿ ಮಾಸಿಕ ಗರಿಷ್ಠ ರೂ.250/-ಗಳನ್ನು ಮರುಪಾವತಿಸಲು ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಸರ್ಕಾರಿ ಆದೇಶದಲ್ಲಿ ಮಂಜೂರಾತಿ ನೀಡಲಾಗಿದೆ.

ಕರ್ನಾಟಕ ಸರ್ಕಾರ ಸಚಿವಾಲಯದ ಉಪ ಕಾರ್ಯದರ್ಶಿ ಹಾಗೂ ಅದಕ್ಕಿಂತ ಮೇಲ್ಪಟ್ಟ ಅಧಿಕಾರಿಗಳ ಹಾಗೂ ಸಮಾನಾಂತರ ಅಧಿಕಾರಿಗಳ ನಿವಾಸದ ದೂರವಾಣಿ ಮತ್ತು ಬ್ರಾಡ್‌ಬ್ಯಾಂಡ್‌ನ ಒಟ್ಟು ಮಾಸಿಕ ಗರಿಷ್ಠ ವೆಚ್ಚದ ಮಿತಿಯನ್ನು ಮರುಪಾವತಿಸುವ ಬಗ್ಗೆ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 213 ಡಿಟಿಎನ್ 2014, ಬೆಂಗಳೂರು,**
**ದಿನಾಂಕ: 31-05-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರ ಸಚಿವಾಲಯದ ಉಪ ಕಾರ್ಯದರ್ಶಿ ಹಾಗೂ ಅದಕ್ಕಿಂತ ಮೇಲ್ಪಟ್ಟ ಅಧಿಕಾರಿಗಳ ಹಾಗೂ ಸಮಾನಾಂತರ ಅಧಿಕಾರಿಗಳ

------2

ನಿವಾಸದ ದೂರವಾಣಿ ವೆಚ್ಚ ಮತ್ತು ಬ್ರಾಡ್‌ಬ್ಯಾಂಡ್‌ನ ಮಾಸಿಕ ಗರಿಷ್ಠ ವೆಚ್ಚವನ್ನು ಈ ಆದೇಶವನ್ನು ಹೊರಡಿಸಿದ ದಿನಾಂಕದಿಂದ ಜಾರಿಗೆ ಬರುವಂತೆ ಈ ಕೆಳಕಂಡಂತೆ ಮರುಪಾವತಿಸಲು ಸರ್ಕಾರ ಮಂಜೂರಾತಿ ನೀಡಿದೆ.

| ಕ್ರಮ ಸಂಖ್ಯೆ | ವೃಂದ | ನಿವಾಸದ ದೂರವಾಣಿ ಮತ್ತು ಬ್ರಾಡ್‌ಬ್ಯಾಂಡ್‌ನ ಮಾಸಿಕ ಗರಿಷ್ಠ ವೆಚ್ಚ (ರೂ.ಗಳಲ್ಲಿ) |
|---|---|---|
| 1 | ಅಪರ ಕಾರ್ಯದರ್ಶಿ ಹಾಗೂ ಸಮಾನಾಂತರ ಹುದ್ದೆ | 1750-00 |
| 2 | ಜಂಟಿ ಕಾರ್ಯದರ್ಶಿ/ ಉಪ ಕಾರ್ಯದರ್ಶಿ/ಪಿ.ಎಸ್-ಗ್ರೇಡ್-1 (ಉಪಕಾರ್ಯದರ್ಶಿ ದರ್ಜೆ) ಹಾಗೂ ಸಮಾನಾಂತರ ಹುದ್ದೆ | 1250-00 |

ಈ ವೆಚ್ಚವನ್ನು ಆಯವ್ಯಯ ಲೆಕ್ಕ ಶೀರ್ಷಿಕೆ "2052-00-090-0-01-052" (ಯೋಜನೇತರ) ದೂರವಾಣಿ ವೆಚ್ಚಗಳು ಇದರಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 959 ವೆಚ್ಚ-12/2014, ದಿನಾಂಕ: 16.05.2016 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಲ್. ಗಂಗಾಧರ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಕಾರ್ಯಕಾರಿ)

ಗೆ:

1) ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ)/(ಜಿ ಮತ್ತು ಎಸ್‌ಎಸ್‌ಎ) ಕರ್ನಾಟಕ, ಬೆಂಗಳೂರು.
2) ಖಜಾನಾಧಿಕಾರಿ, ಕರ್ನಾಟಕ ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು
3) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು,
4) ಸರ್ಕಾರದ ಎಲ್ಲಾ ಅಪರ ಕಾರ್ಯದರ್ಶಿಗಳು/ಜಂಟಿ ಕಾರ್ಯದರ್ಶಿಗಳು/ಉಪ ಕಾರ್ಯದರ್ಶಿಗಳು/ ಪಿ.ಎಸ್.ಗ್ರೇಡ್-1 (ಉಪ ಕಾರ್ಯದರ್ಶಿ ದರ್ಜೆ) /ಸಚಿವರ ಆಪ್ತ ಕಾರ್ಯದರ್ಶಿಗಳು
5) ಅಧೀನ ಕಾರ್ಯದರ್ಶಿ (ವೆಚ್ಚ-12) ಆರ್ಥಿಕ ಇಲಾಖೆ
6) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ
7) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ